ಪ್ರಸ್ತಾವನೆ ಹಾಗೂ ಅಧಿನಿಯಮಗೊಳಿಸುವ ಸೂತ್ರ ಸಂಹಿತೆ ವಿಧೇಯಕದ ಭಾಗವಾಗಿರುತ್ತದೆ"

ಪ್ರಸ್ತಾವವನ್ನು ಅಂಗೀಕರಿಸಲಾಯಿತು.

(ಮೊದಲನೇ ಖಂಡ, ದೀರ್ಘ ಶೀರ್ಷಿಕೆ, ಪ್ರಸ್ತಾವನೆ ಹಾಗೂ ಅಧಿನಿಯಮಗೊಳಿಸುವ ಸೂತ್ರ ಸಂಹಿತೆಗಳನ್ನು ಈ ವಿಧೇಯಕಕ್ಕೆ ಸೇರಿಸಲಾಯಿತು.)

ಪ್ರಸ್ತಾವದ ಅಂಗೀಕಾರ.

ಶ್ರೀ ಕೆ. ಜೆ. ಜಾರ್ಜ್(ವಸತಿ ಮತ್ತು ನಗರಾಭಿವೃದ್ಧಿ ಮಂತ್ರಿಗಳು):- 1992ರ ಕರ್ನಾಟಕ ನಗರಾಭಿವೃದ್ಧಿ ಪ್ರಾಧಿಕಾರ (ತಿದ್ದುಪಡಿ) ವಿಧೇಯಕವನ್ನು ಅಂಗೀಕರಿಸಬೇಕೆಂದು ಕೋರುತ್ತೇನೆ.

ಛೇರ್ಮನ್:- ಪ್ರಸ್ತಾವ ಏನೆಂದರೆ, "1992ರ ಕರ್ನಾಟಕ ನಗರಾಭಿವೃದ್ಧಿ ಪ್ರಾಧಿಕಾರ (ತಿದ್ದುಪಡಿ) ವಿಧೇಯಕವನ್ನು ತಿದ್ದುಪಡಿ ಮಾಡಿರುವಂತೆ ಅಂಗೀಕರಿಸುವುದು."

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು ಮತ್ತು ಮಸೂದೆಗೆ ಒಪ್ಪಿಗೆ ನೀಡಲಾಯಿತು.

11. 1992ರ ಕರ್ನಾಟಕ ಕೈಗಾರಿಕೆ ಪ್ರದೇಶಾಭಿವೃದ್ಧಿ (ತಿದ್ದುಪಡಿ) ವಿಧೇಯಕ

ಪರ್ಯಾಲೋಚನಾ ಪ್ರಸ್ತಾವ

ಶ್ರೀ ಮಲ್ಲಾರಿಗೌಡ ಎಸ್. ಪಾಟೀಲ್: (ಭಾರಿ ಮತ್ತು ಮಧ್ಯಮ ನೀರಾವರಿ ಸಚಿವರು):- ಮಾನ್ಯ ಅಧ್ಯಕ್ಷರೇ , ಬೃಹತ್ ಮತ್ತು ಮಧ್ಯಮ ಕೈಗಾರಿಕೆಗಳ ಸಚಿವೆಯರ ಪರವಾಗಿ 1992ನೇ ಸಾಲಿನ ಕರ್ನಾಟಕ ಕೈಗಾರಿಕ ಪ್ರದೇಶಾಭಿವೃದ್ಧಿ (ತಿದ್ದುಪಡಿ) ವಿಧೇಯಕವನ್ನು ಪರ್ಯಾಲೋಚಿಸಬೇಕೆಂದು ಕೋರುತ್ತೇನೆ.

ಪ್ರಸ್ತಾವವನ್ನು ಮಂಡಿಸಲಾಯಿತು

ಶ್ರೀ ಮಲ್ಲಾರಿ ಗೌಡ ಎಸ್. ಪಾಟೀಲ್:- ಮಾನ್ಯ ಅಧ್ಯಕ್ಷರೇ, ಕರ್ನಾಟಕ ಸ್ಟೇಟ್ ಫೈನಾನ್ಸ್ ಕಾರ್ಪೊರೇಷನ್, ಮ್ಯಾನೇಜಿಂಗ್ ಡೈರೆಕ್ಟರ್ ಯಾರಿದ್ದಾರೆ ಅವರು ಈ ಕರ್ನಾಟಕ ಇಂಡಸ್ಟ್ರಿಯಲ್ ಏರಿಯಾ ಡೆವಲಪ್‌ಮೆಂಟ್ ಬೋರ್ಡಿಗೆ ಮೆಂಬರ್ ಆಗಬೇಕೆಂದು ಈ ತಿದ್ದುಪಡಿ ವಿಧೇಯಕವನ್ನು ಸಭೆಯ ಮುಂದೆ ಪರ್ಯಾಲೋಚನೆಗಾಗಿ ಮಂಡಿಸಿದ್ದೇನೆ. ದಯವಿಟ್ಟು ಈ ತಿದ್ದುಪಡಿ ವಿಧೇಯಕಕ್ಕೆ ಒಪ್ಪಿಗೆ ಕೊಡಬೇಕೆಂದು ಕೇಳಿಕೊಳ್ಳುತ್ತೇನೆ.

ಛೇರ್ಮನ್:- ಪ್ರಸ್ತಾವ ಏನೆಂದರೆ, "1992ನೇ ಇಸವಿಯ ಕರ್ನಾಟಕ ಕೈಗಾರಿಕಾ ಪ್ರದೇಶಾಭಿವೃದ್ಧಿ (ತಿದ್ದುಪಡಿ) ವಿಧೇಯಕವನ್ನು ಪರ್ಯಾಲೋಚಿಸುವುದು."

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು.

ಖಂಡ ಖಂಡವಾಗಿ ವಿಧೇಯಕವನ್ನು ಪರ್ಯಾಲೋಚಿಸುವುದು

ಖಂಡ ; 2

ಛೇರ್ಮನ್:- "ಖಂಡ 2 ಈ ವಿಧೇಯಕದ ಅಂಗವಾಗಿರುತ್ತದೆ.

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು.

(ಖಂಡ 2 ವಿಧೇಯಕಕ್ಕೆ ಸೇರಿಸಲ್ಪಟ್ಟಿತು)

ಖಂಡ 1 ಇತ್ಯಾದಿ:-

ಛೇರ್ಮನ್:- ಪ್ರಸ್ತಾವ ಏನೆಂದರೆ: "ಮೊದಲನೆಯ ಖಂಡ ದೀರ್ಘ ಶೀರ್ಷಿಕೆ, ಪ್ರಸ್ತಾವನೆ ಹಾಗೂ ಅಧಿನಿಯಮಗೊಳಿಸುವ ಸೂತ್ರ ಸಂಹಿತೆ ವಿಧೇಯಕದ ಭಾಗವಾಗಿರುತ್ತದೆ."

ಪ್ರಸ್ತಾವವನ್ನು ಅಂಗೀಕರಿಸಲಾಯಿತು.

(ಮೊದಲನೆಯ ಖಂಡ, ದೀರ್ಘ ಶೀರ್ಷಿಕೆ, ಪ್ರಸ್ತಾವನೆ ಹಾಗೂ ಅಧಿನಿಯಮಗೊಳಿಸುವ ಸೂತ್ರ ಸಂಹಿತೆಗಳನ್ನು ಈ ವಿಧೇಯಕಕ್ಕೆ ಸೇರಿಸಲಾಯಿತು)

ಪ್ರಸ್ತಾವದ ಅಂಗೀಕಾರ

ಶ್ರೀ ಮಲ್ಲಾರಿಗೌಡ ಎಸ್. ಪಾಟೀಲ್: (ಭಾರಿ ಮತ್ತು ಮಧ್ಯಮ ನೀರಾವರಿ ಸಚಿವರು):- ಮಾನ್ಯ ಅಧ್ಯಕರೇ, ಬೃಹತ್ ಮತ್ತು ಮಧ್ಯಮ ಕೈಗಾರಿಕೆಗಳ ಸಚಿವೆಯವರ ಪರವಾಗಿ 1992ನೇ ಸಾಲಿನ ಕರ್ನಾಟಕ ಕೈಗಾರಿಕಾ ಪ್ರದೇಶಾಭಿವೃದ್ಧಿ (ತಿದ್ದುಪಡಿ) ವಿಧೇಯಕವನ್ನು ಅಂಗೀಕರಿಸಬೇಕೆಂದು ಕೋರುತ್ತೇನೆ.

ಛೇರ್ಮನ್:- ಪ್ರಸ್ತಾವ ಏನೆಂದರೆ, "1992ನೇ ಸಾಲಿನ ಕರ್ನಾಟಕ ಕೈಗಾರಿಕ ಪ್ರದೇಶಾಭಿವೃದ್ಧಿ (ತಿದ್ದುಪಡಿ) ವಿಧೇಯಕವನ್ನು ತಿದ್ದುಪಡಿ ಮಾಡಿರುವಂತೆ ಅಂಗೀಕರಿಸುವುದು." ಪ್ರಸ್ತಾವ ಅಂಗೀಕರಿಸಲ್ಪಟ್ಟಿತು ಮತ್ತು ಮಸೂದೆಗೆ ಒಪ್ಪಿಗೆ ನೀಡಲಾಯಿತು

ಛೇರ್ಮನ್:- ಈಗ ಸಭೆಯು ಮುಗಿದು ಪುನ: ದಿನಾಂಕ 31-3-1992ರ ಮಂಗಳವಾರ ಬೆಳಿಗ್ಗೆ 11-00 ಗಂಟೆಗೆ ಸಮಾವೇಶಗೊಳ್ಳುವುದು.

(ಸದನವು ಸಾಯಂಕಾಲ 6-05ಕ್ಕೆ ಮುಕ್ತಾಯಗೊಂಡು ಪುನ: ದಿನಾಂಕ :31-3-92ರ ಮಂಗಳವಾರ ಬೆಳಿಗ್ಗೆ 11-00 ಗಂಟೆಗೆ ಸಮಾವೇಶಗೊಳ್ಳಲು ತೀರ್ಮಾನಿಸಿತು)

(+ ಈ ಚಿಹ್ನೆ ಮಾನ್ಯ ಸದಸ್ಯರ ಟಿಪ್ಪಣಿ ಅಥವಾ ಭಾಷಣವನ್ನು ಪರಿಷ್ಕರಿಸಿಲ್ಲ ಎಂದು ಸೂಚಿಸುತ್ತದೆ.)